# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.7675/2015/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 31.3.2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕು ಬಾಗೂರು ಗ್ರಾಮದ ಸರ್ವೆ ನಂ.4,9,11 ಮತ್ತು 46, ರಲ್ಲಿ ಒಟ್ಟು ಕ್ಷೇತ್ರ 30 ಎಕರೆ ಸರ್ಕಾರಿ ಬೀಳು ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು **ಕೋರಿ.**

*******

ಶ್ರೀಮತಿ ಸರೋಜಮ್ಮ, ಬಾಗೂರು ನಿವಾಸಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಸಿದ್ದಪ್ಪ, ತಹಶೀಲ್ದಾರ್, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ಗುಬ್ಬಿ ತಾಲ್ಲೂಕು ಬಾಗೂರು ಗ್ರಾಮದ ಸರ್ವೆ ನಂ.4,9,11 ಮತ್ತು 46, ರಲ್ಲಿ ಒಟ್ಟು ಕ್ಷೇತ್ರ 30 ಎಕರೆ ಸರ್ಕಾರಿ ಬೀಳು ಜಮೀನಾಗಿದ್ದು, ಈ ಹಿಂದೆ 1967–68ರಲ್ಲಿ ಸುಮಾರು 15 ಜನ ಸವರ್ಣೀಯರಿಗೆ ಮಂಜೂರಾಗಿರುತ್ತದೆ. ಈ ಮಂಜೂರಾತಿಯನ್ನು ಮಾನ್ಯ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ವಜಾ ಮಾಡಲಾಗಿರುತ್ತದೆ. ಈ ಸರ್ಕಾರಿ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಲು ಗ್ರಾಮಸ್ಥರು ಹಾಗೂ ದಲಿತ ಮುಖಂಡರು ಎದುರುದಾರರಿಗೆ ಅರ್ಜಿ ಸಲ್ಲಿಸಿದರೂ ಸಹಾ ಯಾವುದೇ ಕ್ರಮಜರುಗಿಸಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತುವರಿ ಜಮೀನನ್ನು ತೆರವುಗೊಳಿಸಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಸರ್ವೆ ನಂ.4, 9 ಮತ್ತು 11ರ ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸುವ ಬಗ್ಗೆ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಆರ್.ಎ.18/2009-10 ದಿ.26.2.2010ರಂತೆ ಪ್ರಕರಣ ದಾಖಲಾಗಿರುತ್ತದೆ. ಆದ್ದರಿಂದ ಈ ಬಗ್ಗೆ ಯಾವುದೇ ಕ್ರಮ ವಹಿಸಲು ಸಾಧ್ಯವಾಗಿರುವುದಿಲ್ಲ ಹಾಗೂ ಈ ಪ್ರಕರಣದಲ್ಲಿ ಅಂತಿಮ ಆದೇಶವಾದ ನಂತರ ಕ್ರಮವಹಿಸಲಾಗುವುದೆಂದು ತಿಳಿಸಿರುತ್ತಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಈ ಮೇಲ್ಕಾಣಿಸಿದ ಜಮೀನುಗಳ ಮಂಜೂರಾತಿ ಬಗ್ಗೆ ಮಾನ್ಯ ಉಪವಿಭಾಗಾಧಿಕಾರಿಗಳು ಮಂಜೂರಾತಿಯನ್ನು ರದ್ದುಗೊಳಿಸಿ ಆದೇಶ ನೀಡಿರುತ್ತಾರೆ ಎನ್ನುವುದನ್ನು ಎದುರುದಾರರು ಒಪ್ಪಿಕೊಂಡಿರುತ್ತಾರೆ. ಆದರೆ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಮಾನ್ಯ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಆರ್.ಎ.18/2009-10 ದಿ26.2.2010ರಂತೆ ಪ್ರಕರಣ ದಾಖಲಾಗಿ ಚಾಲ್ತಿಯಲ್ಲಿರುತ್ತದೆಯೆಂದು ಉಲ್ಲೇಖಿಸಿರುತ್ತಾರೆ. ಆದರೆ ಈ ಪ್ರಕರಣದ ಬಗ್ಗೆ ಯಾವುದೇ ದಾಖಲಾತಿಗಳನ್ನು ಲಗತ್ತಿಸಿರುವುದಿಲ್ಲ. ಅದು ಅಲ್ಲದೆ, ಸುಮಾರು 6 ವರ್ಷ ಗತಿಸಿದರೂ ಪ್ರಕರಣ ಇನ್ನೂ ಏಕೆ ಚಾಲ್ತಿಯಲ್ಲಿದೆ ಎನ್ನುವ ಬಗ್ಗೆ ಯಾವುದೇ ಮಾಹಿತಿ ನೀಡಿರುವುದಿಲ್ಲ.

6. ಸರ್ಕಾರಿ ಜಮೀನು ಖಾಸಗಿ ವ್ಯಕ್ತಿಗಳಿಗೆ ಮಂಜೂರಾಗಿದ್ದು, ಕಾನೂನು ದೃಷ್ಟಿಯಲ್ಲಿ ಸಮ್ಮತವಲ್ಲವೆಂದು ಮಾನ್ಯ ಉಪವಿಭಾಗಾಧಿಕಾರಿಗಳು ಮಂಜೂರಾತಿಯನ್ನು ರದ್ದುಗೊಳಿಸಿದ ನಂತರವೂ ಎದುರುದಾರರು ಪುನ: ಆ ಜಮೀನನ್ನು ಸರ್ಕಾರದ ವಶಕ್ಕೆ ಪಡೆಯಲ್ಲು ಯಾವುದೇ ಕ್ರಮಕೈಗೊಂಡಿಲ್ಲವೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ. ಕೇವಲ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರಕರಣ ಚಾಲ್ತಿಯಲ್ಲಿದೆಯೆಂದು ನಮೂದಿಸಿದರೆ ಸಾಕಾಗುವುದಿಲ್ಲ, ಆದರೆ ಆ ಪ್ರಕರಣದ ವಿಷಯವಸ್ತು, ಅದರ ದಾಖಲಾತಿಗಳನ್ನು ಹಾಜರುಪಡಿಸಬೇಕಾಗುತ್ತದೆ. ಆದ್ದರಿಂದ ಎದುರುದಾರರು ಸರ್ಕಾರಿ ಜಮೀನನ್ನು ಮಾನ್ಯ ಉಪವಿಭಾಗಾಧಿಕಾರಿಗಳ ಆದೇಶದ ಮೇರೆಗೆ ಸರ್ಕಾರಿ ವಶಕ್ಕೆ ಪಡೆಯದೆ ಕರ್ತವ್ಯದಲ್ಲಿ ಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

7. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕು ಬಾಗೂರು ಗ್ರಾಮದ ಸರ್ವೆ ನಂ.4,9,11 ಮತ್ತು 46, ರಲ್ಲಿ ಒಟ್ಟು ಕ್ಷೇತ್ರ 30 ಎಕರೆ ಸರ್ಕಾರಿ ಬೀಳು ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

31-3-17

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

31/3